**ಭಾರತಕ್ಕೆ ಸಿಂಗಾಪುರ ಗಣರಾಜ್ಯದ ಅಧ್ಯಕ್ಷರ ರಾಷ್ಟ್ರ ಭೇಟಿ (ಜನವರಿ 14-18, 2025)**

ಜನವರಿ 16, 2025

ಸಿಂಗಾಪುರ ಗಣರಾಜ್ಯದ ಅಧ್ಯಕ್ಷರಾದ ಗೌರವಾನ್ವಿತ ಶ್ರೀ ಥರ್ಮನ್ ಷಣ್ಮುಗರತ್ನಂ ಅವರು 2025 ರ 14-18 ಜನವರಿಯವರೆಗೆ ಭಾರತ ರಾಷ್ಟ್ರ ಭೇಟಿಯಲ್ಲಿರಲಿದ್ದಾರೆ. ಅಧ್ಯಕ್ಷ ಥರ್ಮನ್ ಜೊತೆಗೆ ಅವರ ಸಂಗಾತಿ ಶ್ರೀಮತಿ ಜೇನ್ ಇಟ್ಟೋಗಿ ಷಣ್ಮುಗರತ್ನಂ ಕೂಡಾ ಭಾರತಕ್ಕೆ ಭೇಟಿ ನೀಡಲಿದ್ದಾರೆ. ಈ ನಿಯೋಗವು ಸಾರಿಗೆ ಸಚಿವ ಮತ್ತು ಎರಡನೇ ಹಣಕಾಸು ಸಚಿವರಾದ ಚೀ ಹಾಂಗ್ ಟಾಟ್, ಹಿರಿಯ ರಾಜ್ಯ ಸಚಿವರು, ವಿದೇಶಾಂಗ ವ್ಯವಹಾರಗಳ ಸಚಿವಾಲಯ ಮತ್ತು ರಾಷ್ಟ್ರೀಯ ಅಭಿವೃದ್ಧಿ ಸಚಿವಾಲಯದ ಶ್ರೀ ಸಿಮ್ ಆ್ಯನ್, ಸಿಂಗಾಪುರ ಸಂಸತ್ತಿನ ಸದಸ್ಯರು ಮತ್ತು ಅಧಿಕಾರಿಗಳನ್ನು ಒಳಗೊಂಡಿದೆ. ಇದು ಭಾರತಕ್ಕೆ ಅಧ್ಯಕ್ಷ ಥರ್ಮನ್ ಅವರ ಮೊದಲ ಅಧಿಕೃತ ಭೇಟಿಯಾಗಿದೆ.

2. ಅಧ್ಯಕ್ಷ ಥರ್ಮನ್ ಅವರನ್ನು ರಾಷ್ಟ್ರಪತಿ ಭವನದಲ್ಲಿ ಗೌರವಾನ್ವಿತ ರಾಷ್ಟ್ರಪತಿ ಶ್ರೀಮತಿ ದ್ರೌಪದಿ ಮುರ್ಮು ಮತ್ತು ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಸ್ವಾಗತಿಸಿದರು ಮತ್ತು ಅವರಿಗೆ ರಕ್ಷಣಾ ಪಡೆಯಿಂದ ಸಮಾರಂಭಿಕ ಗೌರವವನ್ನು ನೀಡಲಾಯಿತು. ಅಧ್ಯಕ್ಷ ಥರ್ಮನ್ ಅವರು ರಾಜ್ ಘಾಟ್‌ನಲ್ಲಿ ಮಹಾತ್ಮ ಗಾಂಧಿ ಸಮಾಧಿಗೆ ನಮನ ಸಲ್ಲಿಸಿದರು.

3. ರಾಷ್ಟ್ರಪತಿ ಶ್ರೀಮತಿ ದ್ರೌಪದಿ ಮುರ್ಮು ಅವರು ತಮ್ಮ ಗೌರವಾರ್ಥ ಆಯೋಜಿಸಿದ್ದ ಔತಣಕೂಟದಲ್ಲಿ ಭಾಗವಹಿಸಿದ ಅಧ್ಯಕ್ಷ ಥರ್ಮನ್ ಅವರು ಮುರ್ಮು ಅವರ ಜೊತೆ ಸಂವಾದ ನಡೆಸಿದರು. ಇಬ್ಬರೂ ರಾಷ್ಟ್ರಪತಿಗಳು ಭಾರತ-ಸಿಂಗಾಪುರ ದ್ವಿಪಕ್ಷೀಯ ಸಂಬಂಧಗಳ 60ನೇ ವಾರ್ಷಿಕೋತ್ಸವದ ಸ್ಮರಣಾರ್ಥ ಜಂಟಿ ಲೋಗೋವನ್ನು ಅನಾವರಣಗೊಳಿಸಿದರು. ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿ ಸಿಂಗಾಪುರದ ಅಧ್ಯಕ್ಷರನ್ನು ಭೇಟಿ ಮಾಡಿದರು. ಈ ಸಭೆಯ ಸಮಯದಲ್ಲಿ ಇಬ್ಬರೂ ನಾಯಕರು ವ್ಯಾಪಕ ದ್ವಿಪಕ್ಷೀಯ ಸಂಬಂಧವನ್ನು ಪರಿಶೀಲಿಸಿದರು ಮತ್ತು ಭಾರತ-ಸಿಂಗಾಪುರ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ಮಾರ್ಗಗಳ ಕುರಿತು ಚರ್ಚಿಸಿದರು. ಅವರು ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ಸಮಸ್ಯೆಗಳ ಬಗ್ಗೆ ತಮ್ಮ ದೃಷ್ಟಿಕೋನಗಳನ್ನು ಸಹ ವಿನಿಮಯ ಮಾಡಿಕೊಂಡರು.

4. ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ಅಧ್ಯಕ್ಷ ಥರ್ಮನ್ ಅವರನ್ನು ಭೇಟಿ ಮಾಡಿದರು. ಹೆಚ್ಚುವರಿಯಾಗಿ, ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ಶ್ರೀ ನಿತಿನ್ ಗಡ್ಕರಿ; ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ರಾಸಾಯನಿಕಗಳು ಮತ್ತು ರಸಗೊಬ್ಬರ ಸಚಿವ ಶ್ರೀ ಜಗತ್ ಪ್ರಕಾಶ್ ನಡ್ಡಾ; ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ಶ್ರೀ ನಿರ್ಮಲಾ ಸೀತಾರಾಮನ್; ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಶ್ರೀ ಪಿಯೂಷ್ ಗೋಯಲ್; ರೈಲ್ವೆ ಸಚಿವಾಲಯ, ಮಾಹಿತಿ ಮತ್ತು ಪ್ರಸಾರ ಮತ್ತು ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ

ತಂತ್ರಜ್ಞಾನ ಸಚಿವ ಶ್ರೀ ಅಶ್ವಿನಿ ವೈಷ್ಣವ್; ಮತ್ತು ಕೇಂದ್ರ ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಸಹಾಯಕ ಸಚಿವ (IC) ಮತ್ತು ಸಹಾಯಕ ಶಿಕ್ಷಣ ಸಚಿವ ಜಯಂತ್ ಚೌಧರಿ ಕೂಡಾ ಅಧ್ಯಕ್ಷ ಥರ್ಮನ್ ಅವರನ್ನು ಭೇಟಿ ಮಾಡಿದರು.

5. ಅಧ್ಯಕ್ಷ ಥರ್ಮನ್ ರಾಷ್ಟ್ರ ಭೇಟಿಯು ಭಾರತ ಮತ್ತು ಸಿಂಗಾಪುರದ ನಡುವೆ ರಾಜತಾಂತ್ರಿಕ ಸಂಬಂಧಗಳನ್ನು ಸ್ಥಾಪಿಸಿದ 60ನೇ ವಾರ್ಷಿಕೋತ್ಸವದ ಆಚರಣೆಯ ಪ್ರಾರಂಭವನ್ನು ಸೂಚಿಸುತ್ತದೆ, ಇದು ಬಲವಾದ ಮತ್ತು ಬಹುಮುಖಿ ಪಾಲುದಾರಿಕೆಯಾಗಿ ವಿಕಸನಗೊಂಡಿದೆ.

6.  ಸಿಂಗಾಪುರದ ಅಧ್ಯಕ್ಷರು ಜನವರಿ 2025 17-18 ರಂದು ಒಡಿಶಾಗೆ ಭೇಟಿ ನೀಡಲಿದ್ದಾರೆ.

7. ಸಿಂಗಾಪುರವು ಭಾರತದ 'ಆ್ಯಕ್ಟ್ ಈಸ್ಟ್' ನೀತಿ ಮತ್ತು ನಮ್ಮ ದೃಷ್ಟಿಕೋನದ ಇಂಡೋ-ಪೆಸಿಫಿಕ್‌ನ ಪ್ರಮುಖ ಆಧಾರ ಸ್ತಂಭವಾಗಿದೆ. ಈ ಭೇಟಿಯು ಭಾರತ-ಸಿಂಗಾಪುರ ದ್ವಿಪಕ್ಷೀಯ ಸಂಬಂಧಗಳಲ್ಲಿ ಕಾರ್ಯನಿರತ ವರ್ಷವನ್ನು ಅನುಸರಿಸುತ್ತದೆ, ಇದರ ಪ್ರಮುಖ ಅಂಶವೆಂದರೆ ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿಯವರು ಸೆಪ್ಟೆಂಬರ್ 2024 ರಲ್ಲಿ ಸಿಂಗಾಪುರಕ್ಕೆ ಭೇಟಿ ನೀಡಿದ್ದರು, ಆ ಸಂದರ್ಭವು ಭಾರತ-ಸಿಂಗಾಪುರ ಸಂಬಂಧವನ್ನು ಸಮಗ್ರ ಕಾರ್ಯತಂತ್ರದ ಪಾಲುದಾರಿಕೆ ಮಟ್ಟಕ್ಕೆ ಏರಿಸಲು ಸಾಕ್ಷಿಯಾಗಿತ್ತು.

ನವದೆಹಲಿ

ಜನವರಿ 16, 2025